ಶ್ರೀ ಭಗವಾನ್ ಮಹಾವೀರ್ ಜೈನ್ ಸ್ವತಂತ್ರ ಪದವಿಪೂರ್ವ ಕಾಲೇಜು

ದ್ವಿತೀಯ ಪಿ.ಯು.ಸಿ **Mock Paper -1,** ಜನವರಿ 2016

ವಿಷಯ : ಕನ್ನಡ

ಸಮಯ : **3** ಗಂಟೆ 15 ನಿಮಿಷ | ಒಟ್ಟು ಅಂಕಗಳು : **100**

ಅ–ವಿಭಾಗ

**I. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ : 10 × 1 = 10**

1. ಯಾರು ಅನ್ಯಲಿಂಗವನ್ನು ನೆವನಯುವುದಿಲ್ಲ?
2. ಯಾರನ್ನು ಯೋಗಿ ಎನ್ನಬಹುದು?
3. ಮಂದಿ ಮಕ್ಕಳೊಂದಿಗೆ ಹೇಗಿರಬೇಕು?
4. ಲಕ್ಷಾಧಿಗಳ ಚದುರಂಗದಾಟ ಯಾವುದು?
5. ಕೆಂಪು ಪಟ್ಟಿಗೆ ಸೇರಿದ ಪ್ರಾಣಿ ಯಾವುದು?
6. ಧಣಿಗಳ ಮನೆಯ ಪಕ್ಕದಲ್ಲಿ ಯಾವ ಹೊಳೆ ಹರಿಯುತ್ತಿತ್ತು?
7. ಕಲಿಯುಗದ ಅಮೃತ ಯಾವುದು?
8. ಆನೆ ಮತ್ತು ಮಾವುತ ವೇಲಾಯುಧನನ್ನು ಸಾಗ ಹಾಕಲು ಮಠದವರು ಹವಣಿಸಿದ್ದೇಕೆ?
9. ನಾಗರಾಜನ ನಿಗೂಢ ಸಾವಿನ ಬಗ್ಗೆ ಜನರ ಅಭಿಪ್ರಾಯಗಳೇನು?
10. ಪೋಲಿಸರು ಏನೆಂದು ಮಹಜರು ಬರೆದುಕೊಂಡರು?

ಆ–ವಿಭಾಗ

**II.(ಅ) ಕೆಳಗಿನ ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 4 × 2 = 8**

11. ರಾವಣನು ತನ್ನ ಆಪ್ತರನ್ನು ಕುರಿತು ಏನೆಂದು ಹೇಳಿದನು?
12. ಯಾರಿಗೆ ತತ್ವಜ್ಞಾನ ಹೇಳಿ ಪ್ರಯೋಜನವಿಲ್ಲ?
13. ಪಿತ್ತಾಳೆಗಿಂತ ಬಲುಹೀನ ಯಾವುದು?
14. ಕವಯಿತ್ರಿ ಮುಗಿಲತ್ತ ಕೈಚಾಚಿ ಏಕೆ ನಿಂತಿದ್ದಾರೆ?
15. ಹತ್ತಿಯ ಬೀಜ ಲೋಕದ ಹಿತಕ್ಕೆ ತನ್ನನ್ನು ಹೇಗೆ ಸುಟ್ಟುಕೊಳ್ಳುತ್ತದೆ?

**(ಆ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 3 × 2 =6**

16. ಅನ್ಯ ಡಾಕ್ಟರುಗಳು ಬಸಲಿಂಗನ ಕಾಯಿಲೆ ಬಗ್ಗೆ ಏನೆಂದು ಪ್ರತಿಕ್ರಿಯಿಸಿದರು?
17. ಕಲಾಂ ಮೇಷ್ಟ್ರು ಹೇಳಿದ ಯಶಸ್ಸಿನ ಪಂಚಾಕ್ಷರಿ ಮಂತ್ರ ಯಾವುದು?
18. ಮನೋರಮೆ ಕತೆ ಹೇಳೆಂದು ಕೇಳಲು ಕಾರಣವೇನು?
19. ಗಿಡ್ಡ ಮಾಸ್ತರು ಶಾಲೆಯಲ್ಲಿ ಹುಡುಗರಿಗೆ ಏಕೆ ಹೊಡೆಯುತ್ತಾರೆ?

**(ಇ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 3 × 2 = 6**

20. ದುರ್ಗಪ್ಪ ಏಕೆ ಬಂದಿರಬಹುದೆಂದು ನಿರೂಪಕರು ಯೋಚಿಸಿದರು?
21. ಕಾಡಾನೆಗಳ ಹಾವಳಿಗೆ ಪ್ರಕಾಶ್ ನೀಡಿದ ಕಾರಣಗಳೇನು?
22. ಡ್ರೈವರ್‌ನ ತಲೆ ಜಜ್ಜಿ ಹೋದದ್ದು ಹೇಗೆ? ಆನೆ ಅದಕ್ಕೆ ಕಾರಣವೇ?
23. ಖೇಡಿಗಳು ನಾಗರಾಜನನ್ನು ಖೂನಿ ಮಾಡಿರುವನೆಂದು ರಾಮಪ್ಪ ಹೇಗೆ ವಿವರಿಸಿದನು?

ಇ–ವಿಭಾಗ

**III.(ಅ) ಕೆಳಗಿನ ಯಾವುದಾದರೂ ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ: 2 × 3 = 6**

24. ಕಂದರ್ಪ ವಿಮೋಹದಿಂದಗಲ್ದಿದೆ
25. ಬಿನ್ನಾಣದ ಮಾತಿಗೆ ಕೊನೆಯಿಲ್ಲ
26. ಮನ್ನಿಸಲಿ ನಿಮ್ಮನ್ನ ಆ ದೇವರೆ !

**(ಆ) ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ : 1 × 3 = 3**

27. ನಿನಗಾವ ರಸದೊಳಿಷ್ಟಂ?
28. ಅದು ಯಾವ ಶಸ್ತ್ರಕ್ಕೂ ಮಣಿಯದು.

**(ಇ) ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ : 1 × 3 = 3**

29. ಪೋಸ್ಟಾಬಾಕ್ಸ್‌ಗಳನ್ನು ನೇತು ಹಾಕುವುದು ಕಡಿಮೆ ಖರ್ಚಲ್ಲವೇ?
30. ಈ ಕಂಬದೊಳ್ಗೆ ಏನೋ ಸೇರ್‌ಕೊಂಡಿದೆ.

ಈ–ವಿಭಾಗ

**IV.(ಅ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.** **3 × 4 = 12**

31. ಉರಿಲಿಂಗಪೆದ್ದಿಯ ವಚನಗಳಲ್ಲಿನ ಆಶಯವೇನು?
32. ಸಮಾಜ ಕಂಟಕರ ಬಗೆಗೆ ಪುರಂದರದಾಸರ ಅಭಿಪ್ರಾಯಗಳನ್ನು ಬರೆಯಿರಿ.
33. ಹತ್ತಿ, ಚಿತ್ತ ಮತ್ತು ಕವಿತೆಯ ಸ್ವಾರಸ್ಯವನ್ನು ಚರ್ಚಿಸಿ.
34. 'ಒಮ್ಮೆ ನಗುತ್ತೇವೆ' ಎಂಬ ಕವಿತೆಯಲ್ಲಿ ವ್ಯಕ್ತವಾಗುವ ನಗುವಿನ ವೈಶಿಷ್ಟ್ಯ ವಿವರಿಸಿ.

**(ಆ) ಕೆಳಗಿನ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.** **2 × 4 = 8**

35. ಅಭಿವೃದ್ಧಿ ತರುವ ಪ್ರಾಕೃತಿಕ ನಾಶದ ಸ್ವರೂಪವನ್ನು ಪಠ್ಯದ ಹಿನ್ನೆಲೆಯಲ್ಲಿ ಚರ್ಚಿಸಿ.
36. ಹಳ್ಳಿ ಮತ್ತು ಪಟ್ಟಣ ಹೋಟೆಲುಗಳ ಮಾಣಿಯ ಕುರಿತು ಬರೆಯಿರಿ.
37. ಒಳ್ಳೆಯದೊಂದು ಕತೆ ಹೇಳಬೇಕೆಂದಾಗ ಮುದ್ದಣನ ಪ್ರತಿಕ್ರಿಯೆಯೇನು?

**(ಇ) ಕೆಳಗಿನ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.** **2 × 4 = 8**

38. ಅರಣ್ಯ ಇಲಾಖೆಯ ಶತ್ರುಗಳ ಕಾರ್ಯಭಾರವನ್ನು ನಾಗರಾಜ ವಿವರಿಸಿದ್ದು ಹೇಗೆ?
39. ದುರ್ಗಪ್ಪನಿಗೆ ಲೈನ್‌ಮನ್ ಕೆಲಸ ರೋಸಿ ಹೋಗಲು ಕಾರಣಗಳೇನು?
40. ಬೀದಿನಾಯಿಗಳ ನಿವಾರಣೆಗೆ ಖಾನ್ ಸಾಹೇಬರು ತೆಗೆದುಕೊಂಡಿದ್ದ ಕ್ರಮಗಳೇನು?

ಉ–ವಿಭಾಗ

**V. (ಅ) ಕೆಳಗಿನ ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ :** **1 × 5 = 5**

41. ಯಾವಾಗ ಕೋಳಿ ಕೂಗಿಹುದು ಏಳಿ, ತಡವೇಕೆ ಪಾನಕೇಳಿ
ಮೊದಲಾಗಲೀಗ, ಅಂಗಡಿಯ ಕದವ ಈ ಕ್ಷಣಕೆ ತೆರೆಯ ಹೇಳಿ
ಜೀವನದ ನದಿಗೆ ಸೆಳವಿಹುದು, ಮರಣ ಬಂದೀತು ಕ್ಷಣವು ಉರುಳಿ
ಹೋದವದು ತಿರಗಿ ಬಂದಾರೆ, ಅವರು ಬರಲಿಕ್ಕು ಇಲ್ಲ ಮರಳಿ

**ಅಥವಾ**

42. ಪುರುಷದ ಗೃಹದೊಳಗಿದ್ದು, ತಿರಿವನೆ ಮನೆಮನೆಯ?
ತೊರೆಯೊಳಗಿದ್ದನು ತೃಷೆಯಾಗಲರಸುವನೆ ಕೆರೆಯುದಕವ?
ಮಂಗಳಲಿಂಗ ಅಂಗದ ಮೇಲೆ ಇದ್ದು
ಅನ್ಯಲಿಂಗಗಳ ನೆನವನೆ ನಿಮ್ಮ ಭಕ್ತನು
ಉರಿಲಿಂಗಪೆದ್ದಿ ಪ್ರಿಯ ವಿಶ್ವೇಶ್ವರಾ?

**(ಆ) ಭಾಷಾಭ್ಯಾಸ :**

**ಕೆಳಗಿನ ಪ್ರಶ್ನೆಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರವನ್ನು ಬರೆಯಿರಿ :** **6 × 2 = 12**

43. **ನಾನಾರ್ಥ ಬರೆಯಿರಿ :** 1. ಸೂಳ್ 2. ಬಂಟ
44. **ವಿಭಕ್ತಿ ಪ್ರತ್ಯಯ ಬರೆಯಿರಿ :** 1. ಇವರಂ 2. ಅಂಧಕನು
45. **ಕ್ರಿಯಾಪದದ ಕಾಲ ಬರೆಯಿರಿ :** 1. ನಿಂತರು 2. ಕಟ್ಟುವರು
46. **ಸಮಾನಾರ್ಥ ಬರೆಯಿರಿ :** 1. ಮಾರ 2. ಮರ್ಕಟ
47. **ತದ್ಭವ ಬರೆಯಿರಿ :** 1. ಆಶಾ 2. ಅಗ್ನಿ
48. **ನುಡಿಗಟ್ಟನ್ನು ವಾಕ್ಯದಲ್ಲಿ ಬರೆಯಿರಿ :** 1. ನಾಲಿಗೆ ಬಿಗಿಹಿಡಿ 2. ಕೈ ಬೆಚ್ಚಗೆ ಮಾಡು
49. **ದ್ವಿರುಕ್ತಿ ಪದಕ್ಕೆ 2 ಉದಾಹರಣೆ ಬರೆಯಿರಿ.**

**(ಇ) ಪತ್ರಲೇಖನ : ಈ ಕೆಳಗಿನ ಯಾವುದಾದರೂ ಒಂದನ್ನು ಕುರಿತು 15 ವಾಕ್ಯಗಳಿಗೆ ಮೀರದಂತೆ ಒಂದು ಪ್ರಬಂಧವನ್ನು ಬರೆಯಿರಿ ಬರೆಯಿರಿ** **1 × 4 = 4**

50. ಹೆಚ್ಚುತ್ತಿರುವ ವೃದ್ಧಾಶ್ರಮಗಳು
51. ಕೆರೆ ಮತ್ತು ನದಿಗಳ ನೈರ್ಮಲ್ಯೀಕರಣ

**(ಈ) ಪತ್ರಲೇಖನ : ಈ ಕೆಳಗಿನ ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ :** **1 × 4 = 4**

52. ವರ್ಗಾವಣೆ ಪತ್ರ ಅಂಕಪಟ್ಟಿ ಕೋರಿ ಪ್ರಾಚಾರ್ಯರಿಗೆ ಪತ್ರ ಬರೆಯಿರಿ.
53. ಮೆಚ್ಚಿದ ವ್ಯಕ್ತಿಗಳನ್ನು ಕುರಿತು ಸ್ನೇಹಿತರಿಗೆ ಪತ್ರ ಬರೆಯಿರಿ.

**(ಉ) ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ :** **1 × 4 = 4**

54. ಅಪಾಯ ಬಂದಾಗ ಉಪಾಯದಿಂದ ಗೆಲ್ಲಬೇಕು
55. ಊರು ಉಪಕಾರವರಿಯದು, ಹೆಣ ಶೃಂಗಾರವರಿಯದು

*****

**ಶ್ರೀ ಭಗವಾನ್ ಮಹಾವೀರ್ ಜೈನ್ ಸ್ವತಂತ್ರ ಪದವಿಪೂರ್ವ ಕಾಲೇಜು**

**ದ್ವಿತೀಯ ಪಿ.ಯು.ಸಿ Mock Paper -2, ಜನವರಿ 2016**

**ವಿಷಯ : ಕನ್ನಡ**

**ಸಮಯ : 3 ಗಂಟೆ 15 ನಿಮಿಷ** **ಒಟ್ಟು ಅಂಕಗಳು : 100**

---

**ಅ–ವಿಭಾಗ**

**I. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ : 10 × 1 = 10**

1. ರಾವಣನ ಎದುರು ಪ್ರತ್ಯಕ್ಷವಾದ ವಿದ್ಯಾದೇವತೆ ಯಾರು?
2. ಯಾರಿಗೆ ನೆರಳು ಸಿಗುವುದಿಲ್ಲ?
3. ಮುದುಕಿಯ ಭಯಕ್ಕೆ ಕಾರಣವೇನು?
4. ಕವಯಿತ್ರಿ ಯಾರಲ್ಲಿ ಮೊರೆ ಇಡುತ್ತಾರೆ?
5. ಸ್ಥಳೀಯ ಭಾಷೆ ಕಲಿಯದ ಅನ್ಯಭಾಷಿಕರು ಏನಾಗುತ್ತಾರೆ?
6. ಧಣಿ ಎಂದಿಗೂ ಯಾರನ್ನು ನಂಬುವುದಿಲ್ಲ?
7. ಬಾಯಿ ಚಪಲ ಯಾರಿಗೆ ಜಾಸ್ತಿ ಇರುತ್ತದೆ?
8. ನಿರೂಪಕನಿಗೆ ಯಾವ ಕೆಲಸ ಖಾಯಮ್ಮಾಗಿತ್ತು?
9. ಕೃಷ್ಣೇಗೌಡರ ಆನೆ ಮೊದಲು ಯಾವ ಮಠದಲ್ಲಿತ್ತು?
10. ಟೆಲಿಫೋನ್ ಕಂಬದ ಮೇಲೆ ಮೃತನಾದ ಲೈನ್‌ಮನ್ ಯಾರು?

**ಆ–ವಿಭಾಗ**

**II.(ಅ) ಕೆಳಗಿನ ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 4 × 2 = 8**

11. ಉಳಿದ ನಾಲ್ವರು ಪಾಂಡವರ ಬಗ್ಗೆ ದ್ರೌಪದಿಯ ಅಭಿಪ್ರಾಯವೇನು?
12. ಯಾರಿಂದ ಯಾವುದನ್ನು ಹೇಗೆ ಕಲಿಯಬೇಕೆಂದು ಸೋಮನಾಥ ಹೇಳಿದ್ದಾನೆ?
13. ಮಗು ಏನನ್ನು ಕುಡಿದು ಬೆಳೆಯುವುದು.
14. ಶಿಲುಬೆಗೇರಿಸಿದವರ ಗುಣಗಳು ಇಂದು ಯಾವ ವೇಷ ತಾಳಿವೆ?
15. ಕವಯಿತ್ರಿ ಮುಗಿಲತ್ತ ಕೈಚಾಚಿ ಏಕೆ ನಿಂತಿದ್ದಾರೆ?

**(ಆ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 3 × 2 = 6**

16. ತಾನು ಅದೃಷ್ಟವಂತೆಯೆಂದು ಲೇಖಕಿ ಭಾವಿಸಲು ಕಾರಣವೇನು?
17. ಕೇಂದ್ರದ ರೈಲು, ಅಂಚೆ ಇಲಾಖೆಗಳು ಯಾವ ಧೋರಣೆ ಬೆಳೆಸಿಕೊಂಡಿದೆ?
18. ಕಲಾಂ ಅವರ ಬದುಕಿನ ಮಂತ್ರ ಯಾವುದು?
19. ಸುದ್ದಿಯ ಸೂರಪ್ಪ ಗೊಂಬೆಯನ್ನು ಹೇಗೆ ವರ್ಣಿಸುತ್ತಾನೆ?

**(ಇ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 3 × 2 = 6**

20. ಕೃಷ್ಣೇಗೌಡರ ಆನೆ ಹುಟ್ಟಿ ಬೆಳೆದ ಬಗೆ ಹೇಗೆ?
21. ನಾಗರಾಜ ದುರ್ಗಪ್ಪನ ಮೇಲೆ ಏನೆಂದು ರೇಗಿದನು?
22. ಕಾಡಪ್ಪ ಶೆಟ್ಟರು ಯಾವ ವರ್ತಮಾನವನ್ನು ಮುಟ್ಟಿಸಿದನು?
23. ಡ್ರೈವರ್ ಅಬ್ಬಾಸ್, ಕ್ಲೀನರ್ ಕೃಷ್ಣರ ಸಾವಿಗೆ ಕಾರಣವೇನು?

**ಇ–ವಿಭಾಗ**

**III.(ಅ) ಕೆಳಗಿನ ಯಾವುದಾದರೂ ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ: 2 × 3 = 6**

24. ಉಳಿದವರಳಿವೆನಗೇವುದೆಂ?
25. ಚೇಳ್ ಚಿಕ್ಕದೆಂದಳ್ಕರಿಂ ತೆಗೆಯಲ್ ಕಚ್ಚದೇ
26. ಹಿತ್ತಾಳೆಗಿಂತ ಬಲುಹೀನ.

**(ಆ) ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ : 1 × 3 = 3**

27. ಬಸಲಿಂಗಪ್ಪ ನೀನು ತುಂಬಾ ಒಳ್ಳೆಯವನು
28. ಕನ್ನಡಂ ಕತ್ತುರಿಯಲ್ತೆ

**(ಇ) ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ : 1 × 3 = 3**

29. ಜಗದ್ಗುರುಗಳು ಯಾವ ಧೈರ್ಯದ ಮೇಲೆ ಇದರ ಮೇಲೆ ಕುಳಿತುಕೊಳ್ಳುತ್ತಿದ್ದರೋ?
30. ಇತ್ತ ಮುಖ ಹಾಕಲಿ, ಅದನ್ನು ಕೋವೀಲೇ ಹೊಡೀತೀನಿ.

**ಈ–ವಿಭಾಗ**

**IV.(ಅ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. $3 \times 4 = 12$**

31. 'ರಾವಣನಲ್ಲಿ ಕಂಡುಬರುವ ಪಶ್ಚಾತ್ತಾಪವನ್ನು ಕವಿ ಹೇಗೆ ನಿರೂಪಿಸಿದ್ದಾನೆ?
32. ತನಗೊದಗಿದ ಸಂಕಟವನ್ನು ಹೇಳಿಕೊಳ್ಳುವ ದ್ರೌಪದಿಯ ಸ್ವಗತದ ನುಡಿಗಳಾವುವು?
33. ಜನಪದರು ಹೇಳುವಂತೆ ನಮ್ಮ ನೆರೆಹೊರೆ ಹೇಗಿರಬೇಕು?
34. ಮಗ ಸೊಸೆ ಮತ್ತು ಮೊಮ್ಮಗಳು ಮುದುಕಿಯನ್ನು ಹೇಗೆ ನಡೆಸಿಕೊಳ್ಳುವರು?

**(ಆ) ಕೆಳಗಿನ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. $2 \times 4 = 8$**

35. ಪೋಷಕರು ಖಾಸಗಿ ಶಾಲೆಗಳ ಕಡೆ ಹೊರಳಲು ಲೇಖಕರು ಯಾವ ಕಾರಣಗಳನ್ನು ಉದಾಹರಿಸುತ್ತಾರೆ?
36. ಕಲಾಂ ಅವರು ಯಾವಾಗಲೂ ಸಾಧ್ಯತೆಗಳನ್ನು ಅರಸುವ ಆಶಾಜೀವಿ ಹೇಗೆ? ವಿವರಿಸಿ.
37. ಹಳ್ಳಿಯ ಹೋಟೇಲುಗಳಲ್ಲಿ ಬಂದ ನವೀನತೆಯ ಕುರಿತು ಬರೆಯಿರಿ.

**(ಇ) ಕೆಳಗಿನ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. $2 \times 4 = 8$**

38. ಎಲ್ಲರ ನಿರೀಕ್ಷೆ ಸುಳ್ಳಾಗುವಂತೆ ಕೃಷ್ಣೇಗೌಡ ಆನೆಯನ್ನು ಹೇಗೆ ಸಾಕಿದ.
39. ಪುಟ್ಟಯ್ಯ ತನ್ನ ಅಸಹಾಯಕತೆಯನ್ನು ಹೇಗೆ ವಿವರಿಸಿದ್ದಾನೆ?
40. ಕೃಷ್ಣೇಗೌಡನ ಆನೆ ಕಥೆಯಲ್ಲಿ ಬರುವ ಭ್ರಷ್ಟ ವ್ಯವಸ್ಥೆಯ ಚಿತ್ರಣವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

**ಉ–ವಿಭಾಗ**

**V. (ಅ) ಕೆಳಗಿನ ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ : $1 \times 5 = 5$**

41. ಹೆಂಡತಿಯ ಹರಿಬದಲಿಯೊಬ್ಬನೆ
ಗಂಡುಗೂಸೆ ವೈರಿಯನು ಕಡಿ
ಖಂಡವನು ಮಾಡುವನು ಮೇಣ್ ತನ್ನೊಡಲನ್ನಿಕ್ಕುವನು
ಗಂಡರೈವರು ಮೂರು ಲೋಕದ
ಗಂಡರೊಬ್ಬಳನಾಳಲರಿರಿ
ಗಂಡರೋ ನೀವ್ ಭಂಡರೊ ಹೇಳೆಂದಳಿಂದು ಮುಖಿ

**ಅಥವಾ**

42. ಚಿಗುರೆಂದು ಮೆಲೆ ಬೇವು ಸ್ವಾದವಹುದೇ ಚೇಳ್ ಚಿಕ್ಕದೆಂದಳ್ಕರಿಂ
ತೆಗೆಯಲ್ ಕಚ್ಚದೆ ಪಾಲನೂಡಿ ಪಣಿಯಂ ಸಾಕಲ್ಕೆ ವಿಶ್ವಾಸಿಯೇ
ಖಗಮಂ ಸಾಕುವೆನೆಂದು ಗೂಗೆಮರಿಯಂ ಸಂಪ್ರೀತಿಯಿಂದೋವರೇ
ಪಗೆಯಂ ಬಾಲಕನೆಂಬುರೇ ಹರಹರಾ ಶ್ರೀ ಚೆನ್ನಸೋಮೇಶ್ವರಾ

**(ಆ) ಭಾಷಾಭ್ಯಾಸ :**

**ಕೆಳಗಿನ ಪ್ರಶ್ನೆಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರವನ್ನು ಬರೆಯಿರಿ : $6 \times 2 = 12$**

43. **ಈ ಪದಗಳಿಗೆ ತತ್ಸಮ ತದ್ಭವ ಬರೆಯಿರಿ :** 1. ಅಟವಿ 2. ವಿದ್ಯೆ
44. **ಈ ಪದಗಳಿಗೆ ನಾನಾರ್ಥ ಬರೆಯಿರಿ :** 1. ಕಲಿ 2. ಹೊಳೆ
45. **ಈ ಕ್ರಿಯಾಪದಗಳ ಕಾಲ ತಿಳಿಸಿ :** 1. ಓಡಿದರು 2. ಬರುತ್ತಿದ್ದರು
46. **ಈ ಪದಗಳಿಗೆ ವಿಭಕ್ತಿ ಪ್ರತ್ಯಯವನ್ನು ಬರೆಯಿರಿ :** 1. ಧರೆಯೊಳ್ 2. ಬೆಳಗಿಂದ
47. **ಈ ಪದಗಳ ಗುಣವಾಚಕಗಳನ್ನು ತಿಳಿಸಿ :** 1. ದುರ್ಜನ 2. ಎಡಗಣ್ಣು
48. **ಯಾವುದಾದರೂ 2 ರೂಢನಾಮಗಳನ್ನು ಬರೆಯಿರಿ.**
49. **ಈ ಪದಗಳ ನಿಷೇಧ ರೂಪ ಬರೆಯಿರಿ :** 1. ಕಾಣು 2. ನಿಲ್ಲು

**(ಇ) ಕೆಳಗಿನ ಯಾವುದಾದರೂ ಒಂದನ್ನು ಕುರಿತು 15 ವಾಕ್ಯಗಳಿಗೆ ಮೀರದಂತೆ ಒಂದು ಪ್ರಬಂಧವನ್ನು ಬರೆಯಿರಿ ಬರೆಯಿರಿ : $1 \times 4 = 4$**

50. ಕೃಷಿ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಅತ್ಯಗತ್ಯ.
51. ಐತಿಹಾಸಿಕ ಸ್ಥಳಗಳ ಸಂರಕ್ಷಣೆ

**(ಈ) ಪತ್ರಲೇಖನ : ಈ ಕೆಳಗಿನ ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ : $1 \times 4 = 4$**

52. ಬ್ಯಾಂಕಿನಲ್ಲಿ ಉಳಿತಾಯ ಖಾತೆಯ ಅಕೌಂಟ್ ತೆರೆಯಲು ವ್ಯವಸ್ಥಾಪಕರಿಗೊಂದು ಪತ್ರ ಬರೆಯಿರಿ.
53. ನೀವು ಕೈಗೊಂಡ ಶೈಕ್ಷಣಿಕ ಪ್ರವಾಸದ ಕುರಿತು ನಿಮ್ಮ ಗೆಳೆಯ/ಗೆಳತಿಗೆ ಒಂದು ಪತ್ರ ಬರೆಯಿರಿ.

**(ಉ) ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ : $1 \times 4 = 4$**

54. ಆಳಾಗಿ ದುಡಿ ಅರಸಾಗಿ ಉಣ್ಣು.
55. ಮಾತು ಆಡಿದರೆ ಹೋಯ್ತು ಮುತ್ತು ಒಡೆದರೆ ಹೋಯ್ತು.

*****